83 (210) ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ (ಬೆಳ್ಳಾವಿ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ತುಮಕೂರು ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಹಾಸ್ಟೆಲ್‌ಗಳಿಗೆ ಪ್ರವೇಶ ಕೋರಿ ಹೆಚ್ಚಿನ ಬೇಡಿಕೆ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಹೌದಾದಲ್ಲಿ, ಹಾಸ್ಟೇಲ್ ಸೀಟು ಹೆಚ್ಚಳ ಮಾಡಲು ಹಾಕಿಕೊಂಡಿರುವ ಯೋಜನೆಗಳೇನು ;

ಇ) ಸದರಿ ಯೋಜನೆಗಳನ್ನು ಯಾವಾಗಿನಿಂದ ಪ್ರಾರಂಭಿಸಲಾಗುವುದು?

ಶ್ರೀ ಬಾಲಚಂದ್ರ ಲ. ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು):

ಅ) ಹೌದು.

ಆ) 2006-07ನೇ ಸಾಲಿನಲ್ಲಿ ರಾಜ್ಯದಲ್ಲಿನ ಪರಿಶಿಷ್ಟ ಜಾತಿಯ ವಿದ್ಯಾರ್ಥಿನಿಯಲಗಳಲ್ಲಿರುವ ಮೂಲಭೂತ ಸೌಲಭ್ಯಗಳನ್ನು ಪರಿಗಣನೆಗೆ ತೆಗೆದುಕೊಂಡು ತಲಾ 10 ರಿಂದ 15ರಂತೆ ಸಂಖ್ಯಾಬಲ ಹೆಚ್ಚಿಸಿ ಸರ್ಕಾರದ ಆದೇಶ ಸಂ: ಸಕಣ 330 ಪಕವಿ 2006, ದಿನಾಂಕ 22-12-2006ರಲ್ಲಿ ಈಗಾಗಲೇ ಆದೇಶಿಸಲಾಗಿದೆ. ಅಲ್ಲದೇ ತುಮಕೂರು ಜಿಲ್ಲೆ ತಲಾ 50 ಸಂಖ್ಯಾ ಬಲವುಳ್ಳ ಐದು ಮೆಟ್ರಿಕ್ ಪೂರ್ವ / ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳನ್ನು ಹೊಸದಾಗಿ ಪ್ರಾರಂಭಿಸಲು ಸರ್ಕಾರದ ಆದೇಶ ಸಂ: ಸಕಣ 200 ಪಕವಿ 2006, ದಿ: 13-9-2006ರಲ್ಲಿ ಈಗಾಗಲೇ ಆದೇಶಿಸಿದೆ. ಪರಿಶಿಷ್ಟ ವರ್ಗದ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಲ್ಲಿನ ವಿದ್ಯಾರ್ಥಿ:ವಿದ್ಯಾರ್ಥಿನಿಯರ ಸಂಖ್ಯಾಬಲ ಹೆಚ್ಚಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ. ಇದಲ್ಲದೇ ಸರ್ಕಾರದ ಆದೇಶ ಸಂಖ್ಯೆ ಸಕಇ 315 ಪವಯೋ 06, ದಿ: 13-12-2006 ಮತ್ತು ಸಕಇ 220 ಪವಯೋ 06 (ಭಾ), ದಿ: 13-9-2006ರಲ್ಲಿ ತುಮಕೂರು ಜಿಲ್ಲೆಗೆ ನಾಲ್ಕು ಮೆಟ್ರಿಕ್‌ಪೂರ್ವ/ಮೆಟ್ರಿಕ್‌ನಂತರದ ವಿದ್ಯಾರ್ಥಿನಿಲಯಗಳನ್ನು ಹೊಸದಾಗಿ ಮಂಜೂರು ಮಾಡಿ ಆದೇಶ ಹೊರಡಿಸಲಾಗಿದೆ.

ಇ) ಸರ್ಕಾರದಿಂದ ಆದೇಶ ಹೊರಡಿಸಿದಾಗಿನಿಂದ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.

84 (172) ಶ್ರೀ ಮಲ್ಲಿಕಾರ್ಜುನ್ ಸಿದ್ರಾಮಪ್ಪ ಖೂಬಾ (ಬಸವಕಲ್ಯಾಣ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬಸವಕಲ್ಯಾಣದಲ್ಲಿ ನೂತನವಾಗಿ ಸಿದ್ದಗೊಂಡಿರುವ ರಕ್ತ ನಿಧಿಗೆ ಯಾವ ಉಪಕರಣಗಳನ್ನು ಮತ್ತು ವಾಹನಗಳನ್ನು ಒದಗಿಸಲಾಗಿದೆ.

ಆ) ಇಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ವ್ಯವಸ್ಥೆ ಹಾಗೂ ಈಗಿನ ಪರಿಸ್ಥಿತಿಯ ಬಗ್ಗೆ ವಿವರಗಳೇನು ;